ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ಅನುದಾನದ ವಿವರ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

1107 (1338) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 03 ವರ್ಷಗಳಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಸರ್ಕಾರ ನೀಡಿರುವ ಒಟ್ಟು ಅನುದಾನದ ಮೊತ್ತ ಎಷ್ಟು ; ಬಳಕೆಯಾದ ಅನುದಾನದ ವಿವರವನ್ನು ಹಾಗೂ ಯಾವ ಕಾರ್ಯಕ್ಕೆ ಎಷ್ಟು ಅನುದಾನವನ್ನು ಬಳಕೆ ಮಾಡಲಾಗಿದೆ ; ಬಾಕಿ ಉಳಿದಿರುವ ಅನುದಾನದ ಮೊತ್ತ ಎಷ್ಟು ;

(ಆ) ಈ ಕೃಷಿ ವಿಶ್ವವಿದ್ಯಾಲಯದಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಬೋಧಕ ಮತ್ತು ಬೋಧಕೇತರರ ಹುದ್ದೆಗಳ ಸಹಿತ ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಹುದ್ದೆವಾರು ವಿವರ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಉ) ವಿಜಯಪುರದಲ್ಲಿರುವ ಕೃಷಿ ಸ್ನಾತಕೋತ್ತರ ಕೇಂದ್ರವನ್ನು ಕೃಷಿ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸುವ ಕುರಿತು ಸರ್ಕಾರದ ನಿಲುವೇನು ; ಯಾವಾಗ ಕೃಷಿ ವಿಶ್ವ ವಿದ್ಯಾಲಯವನ್ನಾಗಿ ಪರಿವರ್ತಿಸಲಾಗುವುದು ;

(ಊ) ವಿಜಯಪುರದಲ್ಲಿರುವ ಕೃಷಿ ಸ್ನಾತಕೋತ್ತರ ಕೇಂದ್ರದಲ್ಲಿ ಪ್ರಸ್ತುತ ಬೋಧನೆ ಮಾಡಲಾಗುತ್ತಿರುವ ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳು ಯಾವುವು ? (ವಿವರ ನೀಡುವುದು)